752(191) ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರಿನ ಚಿನ್ನಸ್ವಾಮಿ ಕ್ರಿಕೆಟ್ ಕ್ರೀಡಾಂಗಣ ದುರುಪಯೋಗವಾಗುತ್ತಿರುವ ಬಗ್ಗೆ ಕ್ರಮಕೈಗೊಳ್ಳಲು ಸನ್ಮಾನ್ಯ ಘನತೆವೆತ್ತ ರಾಜ್ಯಪಾಲರಿಂದ ಆದೇಶ ಸರ್ಕಾರಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

ಶ್ರೀ ಜಬ್ಬಾರ್ ಖಾನ್ ಹೊನ್ನಳ್ಳಿ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ಸನ್ಮಾನ್ಯ ಘನತೆವೆತ್ತ ರಾಜ್ಯಪಾಲರಿಗೆ ಬಂದಿರುವ ಒಂದು ಮನವಿಯನ್ನು ಸೂಕ್ತವಾಗಿ ಪರಿಗಣಿಸಲು ಸರ್ಕಾರಕ್ಕೆ ಸೂಚನೆ ನೀಡಲಾಗಿರುತ್ತದೆ.

ಆ) ಈ ಬಗ್ಗೆ ಕ್ರೀಡಾ ಆಯುಕ್ತರಿಂದ ವರದಿಯನ್ನು ಕೋರಲಾಗಿದ್ದು ವರದಿ ಸ್ವೀಕೃತವಾದ ನಂತರ ತೆಗೆದುಕೊಳ್ಳಬಹುದಾದ ಕ್ರಮದ ಬಗ್ಗೆ ಪರಿಶೀಲಿಸಲಾಗುವುದು.

753(195) ಶ್ರೀಕಟ್ಟಾ ಸುಬ್ರಮಣ್ಯನಾಯ್ಡು(ಶಿವಾಜಿನಗರ) : ಮಾನ್ಯ ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರು ನಗರದಲ್ಲಿರುವ ಉದ್ಯೋಗ ವಿನಿಮಯ ಕೇಂದ್ರಗಳ ಸಂಖ್ಯೆ ಎಷ್ಟು ಹಾಗೂ ಇಲ್ಲಿಯವರೆಗೆ ಈ ಕೇಂದ್ರಗಳಲ್ಲಿ ವಿವಿಧ ಹುದ್ದೆಗಳಿಗೆ ನೋಂದಣಿ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು ?

ಆ) 2004 ನೇ ಜನವರಿಯಿಂದ ಡಿಸೆಂಬರ್‌ವರೆಗೆ ಈ ಕೇಂದ್ರಗಳಿಂದ ನಿರುದ್ಯೋಗಿಗಳಿಗೆ ನೀಡಿದ ಉದ್ಯೋಗವೆಷ್ಟು ?

ಇ) ತಲಾ 100 ರೂ. ವಸೂಲು ಮಾಡಿ ನಿರುದ್ಯೋಗಿಗಳಿಗೆ ಉದ್ಯೋಗ ಒದಗಿಸಲು ಬೆಂಗಳೂರಿನಲ್ಲಿ ಆನ್‌ಲೈನ್ 'ಕಂಪು' ಯೋಜನೆಯನ್ನು ಸರ್ಕಾರ ಯಾವಾಗ ಜಾರಿಗೆ ತಂದಿತು ;

ಈ) ಎಷ್ಟು ಜನ ನಿರುದ್ಯೋಗಿಗಳಿಂದ ಯಾವ ಯಾವ ಖಾಸಗಿ ಸಂಸ್ಥೆಗಳು ತಲಾ 100ರೂ ವಸೂಲು ಮಾಡಿದೆ ;

ಉ) 100 ರೂ. ನೀಡಿ ನೋಂದಣಿ ಮಾಡಿದವರಿಗೆ ಉದ್ಯೋಗ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಊ) ಈ 'ಕಂಪು' ಯೋಜನೆ ಸ್ಥಗಿತಗೊಳಿಸಲಾಗಿದೆಯೇ ಹಾಗೂ ಬೆಂಗಳೂರು ನಗರದಲ್ಲಿರತಕ್ಕ ಉದ್ಯೋಗ ವಿನಿಮಯ ಕೇಂದ್ರಗಳನ್ನು ಉದ್ಯೋಗ ಪಾರ್ಕ್‌ಗಳನ್ನಾಗಿ ಪರಿವರ್ತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ತನ್ವೀರ್ ಸೇಠ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು) :

ಅ) ಉದ್ಯೋಗ ವಿನಿಮಯ ಕೇಂದ್ರಗಳ ಸಂಖ್ಯೆ 5. 31–12–2004 ರವರೆಗೆ 3,76,153 ಅಭ್ಯರ್ಥಿಗಳನ್ನು ನೊಂದಾಯಿಸಲಾಗಿದೆ.